ಸದನದಲ್ಲಿ ಉತ್ತರಿಸುವ ಪ್ರಶ್ನೆ

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆಂಟನೆಯ ಅಧಿವೇಶನ

## ಮಂಗಳವಾರ, ದಿನಾಂಕ: 23ನೇ ಜುಲೈ, 2019

ಸಾರ್ವಜನಿಕ ಶಿಕ್ಷಣ ಮತ್ತು ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿರುವ ಸಿಬ್ಬಂದಿಗಳ ಬಗ್ಗೆ

ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) -

94 (711) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಸಾರ್ವಜನಿಕ ಶಿಕ್ಷಣ ಇಲಾಖೆ ಮತ್ತು ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ನಿರ್ದೇಶಕರು, ಜಂಟಿ ನಿರ್ದೇಶಕರು, ಉಪ ನಿರ್ದೇಶಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳು/ಶಿಕ್ಷಣಾಧಿಕಾರಿಗಳು, ಮುಖ್ಯೋಪಾಧ್ಯಾಯರು, ಪ್ರಾಚಾರ್ಯರ ಹುದ್ದೆಗಳು ಎಷ್ಟು ; ಇವುಗಳಲ್ಲಿ ಪೂರ್ಣಾವಧಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹುದ್ದೆಗಳು ಎಷ್ಟು ಮತ್ತು ಅವು ಯಾವುವು ; ಪ್ರಭಾರದಲ್ಲಿ ಕಾರ್ಯ ನಿರ್ವಹಿಸುತ್ತಿರುವವರು ಎಷ್ಟು ಮತ್ತು ಅವು ಯಾವುವು ; (ವಿವರ ನೀಡುವುದು)

(ಆ) ಯಾವ ಸಮಯ ಮಿತಿಯ ಒಳಗೆ ಪದೋನ್ನತಿ ನೀಡಿ ಈ ಹುದ್ದೆಗಳಿಗೆ ಖಾಯಂ ಸಿಬ್ಬಂದಿಗಳನ್ನು ಒದಗಿಸಲಾಗುವುದು ; ನೇರ ನೇಮಕಾತಿ ಮಾಡಲು ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು ; ಯಾವ ಸಮಯ ಮಿತಿಯ ಒಳಗೆ ನೇರ ನೇಮಕಾತಿ ಮಾಡಿಕೊಳ್ಳಲಾಗುವುದು ?